# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


## "ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಪತ್ರ"

**ವಿಷಯ:** ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 390 ರಲ್ಲಿ 1ಎ-08ಗು, 391/1 ರಲ್ಲಿ 3ಎ-31ಗು, 391/2 ರಲ್ಲಿ 1ಎ-19ಗು, 391/3 ರಲ್ಲಿ 1ಎ-19ಗು ಮತ್ತು 392/5 ರಲ್ಲಿ 1ಎ-23ಗು ಒಟ್ಟು 9ಎ-20ಗು ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವಂತೆ 9ಎ-16.08ಗು ಅಥವಾ 38090.50 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17(2ಎ) ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುವ ಬಗ್ಗೆ.

**ಉಲ್ಲೇಖ:**

1. ಶ್ರೀ ಪ್ರದೀಪ್ ಎಸ್. ಒಡೆಯರ್ ಬಿನ್ ಎಸ್.ಎಸ್. ಒಡೆಯಾರ್ ರವರ ಅರ್ಜಿ ಸಂಖ್ಯೆ : 4020, ದಿನಾಂಕ: 21/10/2020.
2. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ನಂ. 390328, ದಿನಾಂಕ: 11/08/2022 (ಸ.ನಂ 390), ಎಎಲ್‌ಎನ್(ದೇ)ಎಸ್‌ಆರ್/51/2004-05, ದಿನಾಂಕ: 04/09/2004 [ಸ.ನಂ 391/1, 391/2 (ಹಳೇ ನಂ. 391/2ಪಿ2), 391/3], ಎಎಲ್‌ಎನ್(ದೇ)ಎಸ್‌ಆರ್/221/2007-08, ದಿನಾಂಕ: 08/07/2008(ಸ.ನಂ 392/5).
3. ದಿನಾಂಕ: 30/03/2021 ರಂದು ನಡೆದ ಪ್ರಾಧಿಕಾರದ 131 ನೇ ಸಭೆಯ ವಿಷಯ ಸಂ. 131.71 ರ ನಡಾವಳಿ.
4. ಈ ಪ್ರಾಧಿಕಾರದ ಸಮ ಸಂಖ್ಯೆ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 25/06/2021.
5. ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 0010517, ದಿನಾಂಕ: 23/07/2021 ರಂತೆ ಒಟ್ಟು ರೂ. 32,24,700/- (ಮೂವತ್ತೆರಡು ಲಕ್ಷದ ಇಪ್ಪತ್ತಾ ನಾಲ್ಕು ಸಾವಿರದ ಏಳು ನೂರು ರೂಪಾಯಿಗಳು ಮಾತ್ರ) ರಂತೆ ಶುಲ್ಕಗಳನ್ನು ಪಾವತಿಸಿರುತ್ತಾರೆ.
6. ಈ ಪ್ರಾಧಿಕಾರದ ಸಮಸಂಖ್ಯೆಯ ಹಿಂಬರಹ ಪತ್ರ ದಿನಾಂಕ: 30/11/2021.
7. ಮೆ॥ ಸಂವೀರ್ ಎಸ್ಟೇಟ್ಸ್ ಎಲ್‌ಎಲ್‌ಪಿ ರ ಪರವಾಗಿ ಅಧಿಕೃತ ಸಹಿದಾರರಾದ ಶ್ರೀ ಗುರ್ರಂ ವಿವೇಕ್ ನಾಯ್ಡು ಬಿನ್ ಗುರ್ರಂ ಜನಾರ್ಧನ ನಾಯ್ಡು (ಭೂ ಮಾಲೀಕರಾದ ಶ್ರೀ ಎಡಗುರಿ ಸಂದಿಂತಿ ಅವಿನಾಶ್ ರೆಡ್ಡಿ ಬಿನ್ ಎಡಗುರಿ ಸಂದಿಂತಿ ಭಾಸ್ಕರ ರೆಡ್ಡಿ & ಮೆ॥ ಉದಯ್‌ಕುಮಾರ್ ಮಾರ್ಕೆಟಿಂಗ್ ಪ್ರೊಪ್ರೆಟಿಯರ್ ಕನ್ಸರ್ನ್ ರ ಪರವಾಗಿ ಪ್ರೊಪ್ರೆಟಿಯರ್ ಶ್ರೀಮತಿ ಜೆ.ಕೆ.ಪ್ರವೀಣ ಕುಮಾರಿ ಕೋಂ ಜೆ.ಕೆ ರಾಜೇಶ್ ಸಿಂಗ್ ರವರುಗಳ ಪರವಾಗಿ ನೋಂದಾಯಿತ ಪವರ್ ಆಫ್ ಅಟಾರ್ನಿದಾರರು ಹಾಗೂ ಜಂಟಿ ಅಭಿವೃದ್ಧಿದಾರರು) ರವರ ಮನವಿ ಅರ್ಜಿ ಸಂಖ್ಯೆ : 4638, ದಿನಾಂಕ: 10/10/2023.
8. ದಿನಾಂಕ: 20/10/2023 ರಂದು ನಡೆದ ಪ್ರಾಧಿಕಾರದ 139 ನೇ ಸಭೆಯ ವಿಷಯ ಸಂ. 139.97 ರ ನಡಾವಳಿ.
9. ಮೆ॥ ಅಶ್ರಿತಾಸ್ ಗ್ರೂಪ್ ರವರು ಸಲ್ಲಿಸಿರುವ ದೂರು ಅರ್ಜಿ ದಿನಾಂಕ: 24/11/2023.
10. ಈ ಪ್ರಾಧಿಕಾರದ ಸಮಸಂಖ್ಯೆ ತಿಳುವಳಿಕೆ ಪತ್ರ ದಿನಾಂಕ: 14/12/2023.
11. ಅರ್ಜಿದಾರರ ಮನವಿ ಪತ್ರ ದಿನಾಂಕ: 21/03/2024.
12. ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 17/04/2024.
13. ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 0013152, ದಿನಾಂಕ: 02/05/2024 ರಂತೆ ಒಟ್ಟು ರೂ. 10,60,210/- (ಹತ್ತು ಲಕ್ಷದ ಅರವತ್ತು ಸಾವಿರದ ಎರಡು ನೂರ ಹತ್ತು ರೂಪಾಯಿಗಳು ಮಾತ್ರ) ರಂತೆ /ಶುಲ್ಕಗಳನ್ನು ಪಾವತಿಸಿರುತ್ತಾರೆ.
14. ಅರ್ಜಿದಾರರ ಮನವಿ ಪತ್ರ ದಿನಾಂಕ: 15/05/2024.
15. ಸರ್ಕಾರದ ಅಧಿಸೂಚನೆ ಸಂಖ್ಯೆ : ನಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10/09/2015 ಮತ್ತು ಡಿಪಿಎಎಲ್36ಶಾಸನ 2021, ಬೆಂಗಳೂರು ದಿನಾಂಕ:07/10/2021.

* * * * * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಅರ್ಜಿಯಲ್ಲಿ ಶ್ರೀ ಪ್ರದೀಪ್ ಎಸ್. ಒಡೆಯರ್ ಬಿನ್ ಎಸ್.ಎಸ್. ಒಡೆಯಾರ್ ರವರು ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 391/1 ರಲ್ಲಿ 3ಎ-31ಗು, 391/2 ರಲ್ಲಿ 1ಎ-19ಗು, 391/3 ರಲ್ಲಿ 1ಎ-19ಗು ಮತ್ತು 392/5 ರಲ್ಲಿ 1ಎ-23ಗು ಒಟ್ಟು 8ಎ-12ಗು ಅಥವಾ 33588.44 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಶ್ನಿತ ಜಮೀನುಗಳು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆಯಲ್ಲಿ ವಸತಿ ಭೂಉಪಯೋಗ ವಲಯದಲ್ಲಿ ಇರುತ್ತದೆ. ಪ್ರಶ್ನಿತ ಜಮೀನುಗಳಲ್ಲಿ ಅನುಮೋದಿತ ಮಹಾಯೋಜನೆಯ ಪ್ರಸ್ತಾಪಿತ 15.00 ಮೀ ಅಗಲದ ಹಾಗೂ 45.00 ಮೀ ಅಗಲದ ರಸ್ತೆ ಪಂಕ್ತೀಕರಣ ಇರುತ್ತದೆ. ಸಲ್ಲಿಸಿರುವ ಗ್ರಾಮ ನಕ್ಷೆ ಮತ್ತು ದೃಢೀಕೃತ ಸರ್ವೆ ನಕ್ಷೆಯನ್ವಯ ಪ್ರಶ್ನಿತ ಜಮೀನುಗಳ ಉತ್ತರಕ್ಕೆ ದೇವನಹಳ್ಳಿಯಿಂದ ಸೂಲಿಬೆಲೆಗೆ ಹೋಗಲು ಇರುವ ಹಾಲಿ ರಸ್ತೆ ಪಂಕ್ತೀಕರಣ ಇದ್ದು, ಮಹಾಯೋಜನೆಯಲ್ಲಿ ಪ್ರಶ್ನಿತ ಸ.ನಂ. 390 ರ ಜಮೀನಿನಲ್ಲಿಯೇ ರಸ್ತೆ ಪಂಕ್ತೀಕರಣ ಗುರುತಿಸಿದ್ದು, ಹಾಲಿ ರಸ್ತೆ ಪಂಕ್ತೀಕರಣ & ಮಹಾಯೋಜನೆಯ ನಕ್ಷೆಯಲ್ಲಿ ರಸ್ತೆ ಪಂಕ್ತೀಕರಣ (ಪರಿಚಲನೆ) ವ್ಯತ್ಯಾಸವಾಗಿರುತ್ತದೆ. ಇಂತಹ ನ್ಯೂನ್ಯತೆಗಳಿದ್ದಲ್ಲಿ ವಲಯ ನಿಯಮಾವಳಿಯಲ್ಲಿನ ಪುಟ ಸಂ. 75 ರಲ್ಲಿನ ಕಂಡಿಕೆ 'ಜೆ' ರಲ್ಲಿ "If the alignment of the existing road is shifted in master plan, the existing road as on ground reality/cadastral map may be considered for the proposed road widening. The land use facing the road shall be considered accordingly" ಎಂದು ಸೂಚಿಸಲಾಗಿದ್ದು, ಅದರಂತೆ ಪ್ರಶ್ನಿತ ಜಮೀನುಗಳು ವಸತಿ & 15.00 ಮೀ ಅಗಲದ ಪ್ರಸ್ತಾಪಿತ ರಸ್ತೆ ಪಂಕ್ತೀಕರಣ ಭೂಉಪಯೋಗ ವಲಯವೆಂದು ಹಾಗೂ ಪ್ರಶ್ನಿತ ಜಮೀನುಗಳಿಗೆ ಲಗತ್ತಾಗಿರುವ ಹಾಲಿ ರಸ್ತೆ ಪಂಕ್ತೀಕರಣದಲ್ಲಿ ಮಹಾಯೋಜನೆಯ 45.00 ಮೀ ಅಗಲದ ಪ್ರಸ್ತಾಪಿತ ರಸ್ತೆ ಪಂಕ್ತೀಕರಣ ಪರಿಗಣಿಸಲಾಗಿರುತ್ತದೆ. ಉಲ್ಲೇಖ (2) ರ ಅಧಿಕೃತ ಜ್ಞಾಪನ ಪತ್ರಗಳಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಂದ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ24 ಶಾಸನ2015, ದಿನಾಂಕ: 10/09/2015 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2) ರಂತೆ ಸದರಿ ವಸತಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (3) ರ ದಿನಾಂಕ: 30/03/2021 ರಂದು ನಡೆದ ಪ್ರಾಧಿಕಾರದ 131 ನೇ ಸಭೆಯ ವಿಷಯ ಸಂ. 131.71 ರ ನಡಾವಳಿಯಲ್ಲಿ, ವಸತಿ ವಿನ್ಯಾಸ ನಕ್ಷೆಯು ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದರಿಂದ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 391/1 ರಲ್ಲಿ 3ಎ-31ಗು, 391/2 ರಲ್ಲಿ 1ಎ-19ಗು, 391/3 ರಲ್ಲಿ 1ಎ-19ಗು ಮತ್ತು 392/5 ರಲ್ಲಿ 1ಎ-23ಗು ಒಟ್ಟು 8ಎ-12ಗು ಅಥವಾ 33588.44 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2)(ಎ)ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾತ್ಕಾಲಿಕ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಪ್ರಶ್ನಿತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗೆ ಸಂಬಂಧಿಸಿದಂತೆ, ಉಲ್ಲೇಖ (4) ರ ಈ ಕಛೇರಿಯ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ನಿಗದಿತ ಶುಲ್ಕಗಳನ್ನು ಪಾವತಿಸುವಂತೆ ಹಾಗೂ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು. ಅದರಂತೆ ಅರ್ಜಿದಾರರು ಉಲ್ಲೇಖ (5) ರಲ್ಲಿ ಈ ಪ್ರಾಧಿಕಾರಕ್ಕೆ ನಿಗದಿತ ಶುಲ್ಕಗಳನ್ನು ಮಾತ್ರ ಪಾವತಿಸಿದ್ದು, ಉಲ್ಲೇಖ (6) ರ ಪ್ರಾಧಿಕಾರದ ಹಿಂಬರಹ ಪತ್ರದಲ್ಲಿ ಪ್ರಸ್ತಾವನೆ ಸಂಬಂಧ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ತಿಳಿಸಲಾಗಿರುವ ಹಿನ್ನೆಲೆಯಲ್ಲಿ ಅರ್ಜಿದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸಿರುತ್ತಾರೆ. ಆದರೆ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಯನ್ನು ಪಡೆದುಕೊಂಡಿರುವುದಿಲ್ಲ.

ಉಲ್ಲೇಖ (7) ರಂತೆ ಮೆ॥ ಸಂವೀರ್ ಎಸ್ಟೇಟ್ಸ್ ಎಲ್‌ಎಲ್‌ಪಿ ರ ಪರವಾಗಿ ಅಧಿಕೃತ ಸಹಿದಾರರಾದ ಶ್ರೀ ಗುರ್ರಂ ವಿವೇಕ್ ನಾಯ್ಡು ಬಿನ್ ಗುರ್ರಂ ಜನಾರ್ಧನ ನಾಯ್ಡು (ಭೂ ಮಾಲೀಕರಾದ ಶ್ರೀ ಎಡಗುರಿ ಸಂದಿಂತಿ ಅವಿನಾಶ್ ರೆಡ್ಡಿ ಬಿನ್ ಎಡಗುರಿ ಸಂದಿಂತಿ ಭಾಸ್ಕರ ರೆಡ್ಡಿ & ಮೆ॥ ಉದಯ್‌ಕುಮಾರ್ ಮಾರ್ಕೆಟಿಂಗ್ ಪ್ರೊಪ್ರೆಟಿಯರ್ ಕನ್ಸರ್ನ್ ರ ಪರವಾಗಿ ಪ್ರೊಪ್ರೆಟಿಯರ್ ಶ್ರೀಮತಿ ಜೆ.ಕೆ.ಪ್ರವೀಣ ಕುಮಾರಿ ಕೋಂ ಜೆ.ಕೆ ರಾಜೇಶ್ ಸಿಂಗ್ ರವರುಗಳ ಪರವಾಗಿ ನೋಂದಾಯಿತ

ೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

3/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

: 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

ಪವರ್ ಆಫ್ ಅಟಾರ್ನಿದಾರರು ಹಾಗೂ ಜಂಟಿ ಅಭಿವೃದ್ಧಿದಾರರು) ಇವರು ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಈ ಹಿಂದೆ ತಾತ್ಕಾಲಿಕ ಅನುಮೋದನೆ ಕೋರಲಾಗಿದ್ದ ಪ್ರದೇಶಕ್ಕೆ ಹೆಚ್ಚುವರಿಯಾಗಿ ದೇವನಹಳ್ಳಿ ಗ್ರಾಮದ ಸರ್ವೆ ನಂ. 390 ರಲ್ಲಿ 1ಎ–08ಗು ವಿಸ್ತೀರ್ಣ ಪ್ರದೇಶವನ್ನು ಸೇರಿಸಿಕೊಂಡು ಒಟ್ಟಾರೆಯಾಗಿ 9ಎ–20ಗು ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವಂತೆ 9ಎ–16.08ಗು ಅಥವಾ 38090.50 ಚ.ಮೀ ವಿಸ್ತೀರ್ಣ ಪ್ರದೇಶದ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ24 ಶಾಸನ2015, ದಿನಾಂಕ: 10/09/2015 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2) ರಂತೆ ಸದರಿ ವಸತಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (8) ರ ದಿನಾಂಕ: 20/10/2023 ರಂದು ನಡೆದ ಪ್ರಾಧಿಕಾರದ 139 ನೇ ಸಭೆಯ ವಿಷಯ ಸಂ. 139.97 ರ ನಡಾವಳಿಯಲ್ಲಿ, ಅನುಮೋದಿತ ಮಹಾಯೋಜನೆಯ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯನ್ನು ಪಡೆದುಕೊಂಡು, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 390 ರಲ್ಲಿ 1ಎ–08ಗು, 391/1 ರಲ್ಲಿ 3ಎ–31ಗು, 391/2 ರಲ್ಲಿ 1ಎ–19ಗು, 391/3 ರಲ್ಲಿ 1ಎ–19ಗು ಮತ್ತು 392/5 ರಲ್ಲಿ 1ಎ–23ಗು ಒಟ್ಟು 9ಎ–20ಗು ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವಂತೆ 9ಎ–16.08ಗು ಅಥವಾ 38090.50 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಪ್ರಾಧಿಕಾರದ ಸಾಮಾನ್ಯ ಷರತ್ತುಗಳಿಗೆ ಒಳಪಡಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಉಲ್ಲೇಖ (9) ರಂತೆ ಮೆ॥ ಅಶ್ರಿತಾಸ್ ಗ್ರೂಪ್ ರವರು ದೂರು ಅರ್ಜಿ ಸಲ್ಲಿಸಿ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸ.ನಂ 391/1 ರಲ್ಲಿ 3ಎ–31ಗು, 391/2ಪಿ2 (ಹಳೇ ಸ.ನಂ 391/2) ರಲ್ಲಿ 1ಎ–19ಗು & 391/3 ರಲ್ಲಿ 1ಎ–19ಗು & 392/5 (ಹಳೇ ಸ.ನಂ 392) ರಲ್ಲಿ 1ಎ–23ಗು ಒಟ್ಟು 8ಎ–12ಗು ವಿಸ್ತೀರ್ಣದ ಜಮೀನುಗಳಿಗೆ ಸಂಬಂಧಿಸಿದಂತೆ ಮಾನ್ಯ 11 ನೇ ಹೆಚ್ಚುವರಿ ಸಿವಿಲ್ ಮತ್ತು ಸೆಷನ್ ನ್ಯಾಯಾಧೀಶರು (ಕಮರ್ಷಿಯಲ್ ಕೋರ್ಟ್), ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಓ.ಎಸ್ ನಂ 436/2023 ರಂತೆ ಪ್ರಕರಣ ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 20/11/2023 ರಂದು ತಾತ್ಕಾಲಿಕ ತಡೆಯಾಜ್ಞೆ (Temporary Injunction) ನೀಡಿರುವುದರಿಂದ, ಪ್ರಶ್ನಿತ ಜಮೀನುಗಳಿಗೆ ಸಂಬಂಧಿಸಿದಂತೆ ಪ್ರಾಧಿಕಾರದಿಂದ ಯಾವುದೇ ನಕ್ಷೆಗೆ ಅನುಮೋದನೆಯನ್ನು ನೀಡಬಾರದೆಂದು ಕೋರಿರುತ್ತಾರೆ. ಸದರಿ ತಕರಾರು ಅರ್ಜಿಯಲ್ಲಿನ ಅಂಶಗಳ ಬಗ್ಗೆ ವಿವರಣೆ / ಸಮಜಾಯಿಷಿ ನೀಡುವಂತೆ ಅರ್ಜಿದಾರರನ್ನು ಉಲ್ಲೇಖ (10) ರಲ್ಲಿ ಕೋರಲಾಗಿತ್ತು.

ಉಲ್ಲೇಖ (11) ರಂತೆ ಅರ್ಜಿದಾರರು ಮನವಿ ಸಲ್ಲಿಸಿ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸ.ನಂ 391/1 ರಲ್ಲಿ 3ಎ–31ಗು, 391/2ಪಿ2 (ಹಳೇ ಸ.ನಂ 391/2) ರಲ್ಲಿ 1ಎ–19ಗು & 391/3 ರಲ್ಲಿ 1ಎ–19ಗು & 392/5 (ಹಳೇ ಸ.ನಂ 392) ರಲ್ಲಿ 1ಎ–23ಗು ಒಟ್ಟು 8ಎ–12ಗು ವಿಸ್ತೀರ್ಣದ ಜಮೀನುಗಳಿಗೆ ಸಂಬಂಧಿಸಿದಂತೆ ಮಾನ್ಯ 11 ನೇ ಹೆಚ್ಚುವರಿ ಸಿವಿಲ್ ಮತ್ತು ಸೆಷನ್ ನ್ಯಾಯಾಲಯವು ದಿನಾಂಕ: 20/11/2023 ರಂದು ನೀಡಲಾಗಿರುವ ತಡೆಯಾಜ್ಞೆಯನ್ನು ದಿನಾಂಕ: 29/02/2024 ರಂದು ವಜಾ ಮಾಡಿ ಆದೇಶಿಸಲಾಗಿರುವುದರಿಂದ, ಮಾನ್ಯ ನ್ಯಾಯಾಲಯದ ಆದೇಶದ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸಿ, ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಹಾಗೂ ಮಾನ್ಯ ನ್ಯಾಯಾಲಯದ ತಡೆಯಾಜ್ಞೆಯು ವಜಾ ಮಾಡಿರುವ ಬಗ್ಗೆ ಅರ್ಜಿದಾರರು ನ್ಯಾಯಾಲಯದ ಆದೇಶದ ಪ್ರತಿಯನ್ನು ಸಲ್ಲಿಸಿರುವುದರಿಂದ, ಪ್ರಶ್ನಿತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (12) ರ ಈ ಕಛೇರಿಯ ಶುಲ್ಕಪಾವತಿ ಸೂಚನಾ ಪತ್ರದಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸುವಂತೆ ಹಾಗೂ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ತಿಳಿಸಲಾಗಿರುವ ಹಿನ್ನೆಲೆಯಲ್ಲಿ ಉಲ್ಲೇಖ (13) ರಂತೆ ನಿಗಧಿತ ಶುಲ್ಕಗಳನ್ನು ಪಾವತಿಸಿ, ಉಲ್ಲೇಖ (14) ರಂತೆ ಅರ್ಜಿದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27/01/2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29/01/2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳ ಅನುಸಾರ, ಉಲ್ಲೇಖ (9) ರ ಪ್ರಾಧಿಕಾರದ

ಸಭೆಯ ನಡಾವಳಿಯ ರೀತ್ಯ ಹಾಗೂ ಉಲ್ಲೇಖ (15) ರ ಸರ್ಕಾರದ ಅಧಿಸೂಚನೆಯನ್ವಯ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 390 ರಲ್ಲಿ 1ಎ–08ಗು, 391/1 ರಲ್ಲಿ 3ಎ–31ಗು, 391/2 ರಲ್ಲಿ 1ಎ–19ಗು, 391/3 ರಲ್ಲಿ 1ಎ–19ಗು ಮತ್ತು 392/5 ರಲ್ಲಿ 1ಎ–23ಗು ಒಟ್ಟು 9ಎ–20ಗು ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವಂತೆ 9ಎ–16.08ಗು ಅಥವಾ 38090.50 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರನ್ವಯ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಆದೇಶ

**ಆದೇಶ ಸಂಖ್ಯೆ : ಬಿಐಎಪಿಎ/ಟಿಪಿ03/ಎಲ್ಎಒ/31/2020–21/24–25** 260 **ದಿನಾಂಕ:** 20 MAY 2024

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015 ರ ಕಲಂ 17(2) (ಎ) ರಡಿಯಲ್ಲಿ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸರ್ವೆ ನಂ. 390 ರಲ್ಲಿ 1ಎ–08ಗು, 391/1 ರಲ್ಲಿ 3ಎ–31ಗು, 391/2 ರಲ್ಲಿ 1ಎ–19ಗು, 391/3 ರಲ್ಲಿ 1ಎ–19ಗು ಮತ್ತು 392/5 ರಲ್ಲಿ 1ಎ–23ಗು ಒಟ್ಟು 9ಎ–20ಗು ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವಂತೆ 9ಎ–16.08ಗು ಅಥವಾ 38090.50 ಚ.ಮೀ ವಿಸ್ತೀರ್ಣ ಪ್ರದೇಶವನ್ನು ಮಟ್ಟ ಮಾಡುವುದು, ನೆಲಗಟ್ಟಿ ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲುಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿ ದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಗಳನ್ನೊಳಗೊಂಡಂತೆ ನಿವೇಶನಗಳು ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಲಾ ಪ್ರದೇಶ ಮಳೆನೀರು ಸಂಗ್ರಹಣೆ ಘಟಕ (Rain water Harvesting), ಸೋಕ್‌ಪಿಟ್ (Soak pit) ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡಿಸಿ, ವಸತಿ ವಿನ್ಯಾಸ ನಕ್ಷೆಗೆ "ತಾತ್ಕಾಲಿಕ ಅನುಮೋದನೆ" ನೀಡಲಾಗಿದೆ.

ನಿಬಂಧನೆಗಳು :–

1) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ 02 ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಸತಿ ವಿನ್ಯಾಸದ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸದಿದ್ದಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2) ಪ್ರಾಧಿಕಾರಕ್ಕೆ ಸಮಾಧಾನವಾಗುವಂತೆ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ನಿಯಮಿಸಬಹುದಾದ ಅಂಥ ನಿಯಮಗಳಿಗೆ ಅನುಸಾರವಾಗಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಮಂಜೂರಾತಿಯನ್ನು ನೀಡಲಾಗಿದೆ.
3) ತಾತ್ಕಾಲಿಕ ಅನುಮೋದನೆ ಆಗಿರುವ ವಸತಿ ವಿನ್ಯಾಸ ನಕ್ಷೆಯ ರೀತ್ಯ ಮಾಲೀಕನು ಯಾವುದೇ ಪರಿಹಾರವನ್ನು ಕ್ಲೇಮು ಮಾಡದೆಯೇ ಉಚಿತವಾಗಿ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ನಾಗರೀಕ ಸೌಲಭ್ಯ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಹಾಗೂ ಸಾರ್ವಜನಿಕ ಉಪಯೋಗದ ಉದ್ಯಾನವನಗಳನ್ನು & ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸತಕ್ಕದ್ದು. ನಾಗರೀಕ ಸೌಲಭ್ಯ ನಿವೇಶನ ಮತ್ತು ಉದ್ಯಾನವನ ಪ್ರದೇಶಗಳಿಗೆ Chain link Fencing ಅಳವಡಿಸಿ ಸಂರಕ್ಷಿಸತಕ್ಕದ್ದು.
4) ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ ಮಂಡಳಿ/ ಇಲಾಖೆಯಿಂದ ಕಾರ್ಯಪೂರ್ತಿ ಪ್ರಮಾಣ ಪತ್ರವನ್ನು ಪಡೆದು ಮತ್ತು ಸ್ಥಳೀಯ ಸಂಸ್ಥೆಗೆ

ಉದ್ಯಾನವನ & ರಸ್ತೆಗಳನ್ನು ಹಾಗೂ ನಾಗರೀಕ ಸೌಲಭ್ಯ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಬಿಟ್ಟುಕೊಟ್ಟ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.

5) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ರೀತ್ಯ ಅನುಮೋದನೆ ನೀಡಿದ 02 ವರ್ಷಗಳೊಳಗಾಗಿ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

6) ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ವಸತಿ ವಿನ್ಯಾಸವನ್ನು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ವಸತಿ ವಿನ್ಯಾಸದಲ್ಲಿನ ನಿವೇಶಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ನಿವೇಶನಗಳಲ್ಲಿರುವ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ನೀಡತಕ್ಕದ್ದಲ್ಲ.

7) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

8) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ Water (Prevention and Control of Pollution) Act 1974 ರ ಕಲಂ 25 ರ ರೀತ್ಯ ಸೂಕ್ತ ಪ್ರಮಾಣದ Sewage Treatment Plant (ತ್ಯಾಜ್ಯನೀರು ಸಂಸ್ಕರಣಾ ಘಟಕ) ಸ್ಥಾಪಿಸಲು Consent for Establishment ಪೂರ್ವಾನುಮತಿ ಪಡೆಯದೇ ಪ್ರಶ್ನಿತ ನಿವೇಶನ / ಜಾಗದಲ್ಲಿ ನೆಲ ಅಗಿಯುವಿಕೆ ಒಳಗೊಂಡಂತೆ ಯಾವುದೇ ರೀತಿಯ ಕಟ್ಟಡ ನಿರ್ಮಾಣ ಅಥವಾ ವಸತಿ ವಿನ್ಯಾಸ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದಲ್ಲ. ಉದ್ದೇಶಿತ ಕಟ್ಟಡ / ನೆಲ ಅಭಿವೃದ್ಧಿ ಕಾಮಗಾರಿಗಳನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ Consent for Establishment ಅನುಮತಿ ಪಡೆಯತಕ್ಕದ್ದು.

9) ಪ್ರಸ್ತಾವಿತ ವಸತಿ ವಿನ್ಯಾಸದಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ವಸತಿ ವಿನ್ಯಾಸದ ಮಾಲೀಕರು ಒದಗಿಸತಕ್ಕದ್ದು.

10) ಪ್ರಶ್ನಿತ ಜಮೀನುಗಳಲ್ಲಿ ಸರ್ಕಾರಿ ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

11) ಅರ್ಜಿದಾರರು ಉದ್ದೇಶಿಸಿರುವ ಜಮೀನುಗಳಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

12) ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನುಗಳ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.

13) ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿನ ನಿವೇಶನಗಳನ್ನು ಯಾವುದೇ ಉಪವಿಭಜನೆ ಮಾಡಿ ಮಾರಾಟ ಮಾಡತಕ್ಕದ್ದಲ್ಲ, ಒಂದು ವೇಳೆ ಯಾವುದೇ ಬದಲಾವಣೆಯ ಅವಶ್ಯಕತೆ ಇದ್ದಲ್ಲಿ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡಬಾರದು.

14) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

15) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆಬದಿ ಚರಂಡಿ, ಕಲ್‌ವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ/ನಗರ ಸ್ಥಳೀಯ ಸಂಸ್ಥೆಯ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

16) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಸ್ಥಳೀಯ ಸಂಸ್ಥೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

17) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ವಿದ್ಯುದ್ಧಿಕರಣೆ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

18) ಪ್ರಸ್ತಾಪಿತ ವಸತಿ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

19) ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.

20) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಕಡೆ ಗಿಡ/ಮರಗಳನ್ನು ಬೆಳೆಸುವುದು.

21) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಪ್ರದೇಶದಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

22) ವಸತಿ ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

23) ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

24) ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನೆ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ವಿನ್ಯಾಸ ನಕ್ಷೆಗೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

25) ಮೇಲಿನಂತೆ ನೀಡಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

26) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ: 21/04/2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling trucks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

27) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

ಅರ್ಜಿದಾರರು ವಸತಿ ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಒಟ್ಟಾರೆಯಾಗಿ ಅಭಿವೃದ್ಧಿಪಡಿಸಿದ ನಂತರ, ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಪಡೆಯುವ ಪೂರ್ವದಲ್ಲಿ ವಸತಿ ವಿನ್ಯಾಸದಲ್ಲಿನ ಉದ್ಯಾನವನ & ಬಯಲು ಪ್ರದೇಶ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಯಾದ ದೇವನಹಳ್ಳಿ ಪುರಸಭೆಗೆ ಹಾಗೂ ನಾಗರೀಕ ಸೌಲಭ್ಯದ ನಿವೇಶನವನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರಗಳ ಮುಖಾಂತರ ಹಸ್ತಾಂತರಿಸಿ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ನೀರು

ಸರಬರಾಜು, ಒಳಚರಂಡಿ ಮಳೆನೀರು ಸಂಗ್ರಹಣೆ ಘಟಕ (Rain water Harvesting), Sewage Treatment Plant (ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ)/ Soak pit, ಅಭಿವೃದ್ಧಿಪಡಿಸಿರುವ ಬಗ್ಗೆ ಹಾಗೂ ರಸ್ತೆ ಕಾಮಗಾರಿಗಳು, ಮಳೆನೀರು ಚರಂಡಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಯಾದ ದೇವನಹಳ್ಳಿ ಪುರಸಭೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ ಹಾಗೂ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ವಸತಿ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಪಡೆಯಲು ಹಾಗೂ ವಸತಿ ವಿನ್ಯಾಸದಲ್ಲಿನ ನಿವೇಶನಗಳನ್ನು ಬಿಡುಗಡೆಗೊಳಿಸಲು ಮನವಿ ಸಲ್ಲಿಸತಕ್ಕದ್ದು.

**ಲಗತ್ತು:-**
ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಮಾತ್ರ ನೀಡಲಾಗಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ.

20/5/2024

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

ರವರಿಗೆ,
ಮೆ॥ ಸಂವೀರ್ ಎಸ್ಟೇಟ್ಸ್ ಎಲ್‌ಎಲ್‌ಪಿ ರ ಪರವಾಗಿ ಅಧಿಕೃತ
ಸಹಿದಾರರಾದ ಶ್ರೀ ಗುರ್ರಂ ವಿವೇಕ್ ನಾಯ್ಡು ಬಿನ್ ಗುರ್ರಂ
ಜನಾರ್ಧನ ನಾಯ್ಡು (ಭೂ ಮಾಲೀಕರಾದ ಶ್ರೀ ಎಡಗುರಿ
ಸಂದಿಂತಿ ಅವಿನಾಶ್ ರೆಡ್ಡಿ ಬಿನ್ ಎಡಗುರಿ ಸಂದಿಂತಿ ಭಾಸ್ಕರ ರೆಡ್ಡಿ
& ಮೆ॥ ಉದಯ್‌ಕುಮಾರ್ ಮಾರ್ಕೆಟಿಂಗ್ ಪ್ರೊಪ್ರೈಟಿಯರ್
ಕನ್ಸರ್ನ್ ರ ಪರವಾಗಿ ಪ್ರೊಪ್ರೈಟಿಯರ್
ಶ್ರೀಮತಿ ಜಿ.ಕೆ.ಪ್ರವೀಣ ಕುಮಾರಿ ಕೋಂ ಜಿ.ಕೆ ರಾಜೇಶ್ ಸಿಂಗ್
ರವರುಗಳ ಪರವಾಗಿ ನೋಂದಾಯಿತ ಪವರ್ ಆಫ್
ಅಟಾರ್ನಿದಾರರು ಹಾಗೂ ಜಂಟಿ ಅಭಿವೃದ್ಧಿದಾರರು),
ನಂ.401, 4 ನೇ ಹಂತ, ರಸ್ತೆ ಸಂಖ್ಯೆ : 36,
ಸ್ಕೋಡಾ ಶೋರೂಂ ಮೇಲ್ಭಾಗ,
ಸಿ.ಬಿ.ಐ ಕಾಲೋನಿ, ಜ್ಯುಬ್ಲಿ ಹಿಲ್ಸ್,
ಹೈದರಾಬಾದ್, ತೆಲಂಗಾಣ-500033.